# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಅನುದಾನಿತ ಖಾಸಗಿ ಶಿಕ್ಷಣ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ನೌಕರರಿಗೆ ಪ್ರಸೂತಿ ರಜೆಯನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ :
1) ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ 4 ಎಸ್‌ಆರ್‌ಎಸ್ 2012, ದಿ: 14-6-2012.
2) ಆಯುಕ್ತರು, ಸಾ.ಶಿ.ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ ಸಿ8(1) ಶಾ.ಶಿ.ಅ. /ಸೇ.ಸೌಲಭ್ಯ –180/ 2015–16, ದಿ: 5-2-2016.
3) ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು, ಇವರ ಸುತ್ತೋಲೆ ಸಂಖ್ಯೆ ಪಪೂಶಿ/ಸಿ-3/ಎಸ್‌ಯು/ಮೆ.ರಜೆ/2013-14.

08(1) 12/7/2016
8/11/7
ESE-2
13785 12/7/16

* * * * *

ಪ್ರಸ್ತಾವನೆ :-

ಮೇಲೆ ಓದಲಾದ (1)ರ ಆದೇಶದಲ್ಲಿ ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿಗಳ ನಿಯಮ135(1)ರ ಪ್ರಕಾರ ಸರ್ಕಾರಿ ನೌಕರರಿಗೆ ಆ ನಿಯಮದಲ್ಲಿ ವಿಧಿಸಲಾದ ನಿಬಂಧನೆಗಳಿಗೆ ಒಳಪಟ್ಟು 135 ದಿನಗಳ ಪ್ರಸೂತಿ ರಜೆಯ ಅವಧಿಯನ್ನು ದಿನಾಂಕ 01-04-2012ರಿಂದ ಜಾರಿಗೆ ಬರುವಂತೆ 180 (ಒಂದು ನೂರ ಎಂಬತ್ತು) ದಿನಗಳಿಗೆ ಹೆಚ್ಚಿಸಲಾಗಿದೆ.

ಓದಲಾದ (2)ರ ಪತ್ರದಲ್ಲಿ, ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರು ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿಗಳ ನಿಯಮ 135ರಡಿಯಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ 180 ದಿನಗಳ ಪ್ರಸೂತಿ ರಜೆಯನ್ನು ಮತ್ತು ನಿಯಮ 135(ಬಿ)ರಡಿಯಲ್ಲಿ 15 ದಿನಗಳ ಪಿತೃತ್ವ ರಜೆ ಮಂಜೂರು ಮಾಡುವ ಅವಕಾಶವನ್ನು ಕಲ್ಪಿಸಲಾಗಿದ್ದು, ಖಾಸಗಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಮತ್ತು ಪುರುಷ ನೌಕರರಿಗೆ ಈ ಸೌಲಭ್ಯವನ್ನು ವಿಸ್ತರಿಸಿರುವುದಿಲ್ಲವೆಂದು ಕರ್ನಾಟಕ ಶಿಕ್ಷಣ ಅಧಿನಿಯಮ 1983ರಡಿ ರಚಿಸಿರುವ ಕರ್ನಾಟಕ ಶಿಕ್ಷಣ ಸಂಸ್ಥೆಗಳ (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿ ವರ್ಗದ ಸೇವಾ ಷರತ್ತು ಮತ್ತು ನೇಮಕಾತಿ ನಿಬಂಧನೆಗಳು) ನಿಯಮಗಳು 1999ರ ನಿಯಮ 3ರಲ್ಲಿನ ಅನುಬಂಧ –2ರಲ್ಲಿ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗೆ ಅರ್ಹವಿಲ್ಲದಿರುವ ಸೇವಾ ಸೌಲಭ್ಯಗಳ ಬಗ್ಗೆ ವಿವರಿಸಲಾಗಿದೆ. ಈ ಅನುಬಂಧ 2ರಲ್ಲಿ ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಸಿಬ್ಬಂದಿಗೆ ಪ್ರಸೂತಿ ರಜೆ ಮತ್ತು ಪುರುಷ ಸಿಬ್ಬಂದಿಗೆ ಪಿತೃತ್ವ ರಜೆ ಮಂಜೂರು ಮಾಡುವ ಬಗ್ಗೆ ಪ್ರಸ್ತಾಪಿಸಿಲ್ಲ. ಸರ್ಕಾರಿ ನೌಕರರಿಗೆ ನೀಡುತ್ತಿರುವ ಕಾಲಮಿತಿ ಬಡ್ತಿ, ಸ್ವಯಂ ಚಾಲಿತ ಬಡ್ತಿ, ಸ್ವಯಂ ನಿವೃತ್ತಿ ಮತ್ತು ಸೇವೆಯಲ್ಲಿದ್ದಾಗಲೇ ಮರಣ ಹೊಂದಿದ ದಿವಂಗತ ನೌಕರರ ಕುಟುಂಬದವರಿಗೆ ಅನುಕಂಪದ ಆಧಾರದ ಮೇಲೆ ಉದ್ಯೋಗ ನೀಡುವಂತಹ ಸೌಲಭ್ಯಗಳನ್ನು ಈಗಾಗಲೇ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿನ ಸಿಬ್ಬಂದಿಗೂ ಸಹ ವಿಸ್ತರಿಸಲಾಗಿದೆ. ಅದರಂತೆ ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಸಿಬ್ಬಂದಿಗೆ ಪ್ರಸೂತಿ ರಜೆ ಮತ್ತು ಪುರುಷ ಸಿಬ್ಬಂದಿಗೆ ಪಿತೃತ್ವ ರಜೆ ಮಂಜೂರು ಮಾಡುವ ಬಗ್ಗೆ ಆದೇಶ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಓದಲಾದ (3)ರ ಸುತ್ತೋಲೆಯಲ್ಲಿ ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು, ಇವರು ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ 4 ಎಸ್.ಆರ್.ಎಸ್ 2012, ದಿನಾಂಕ 14-6-2012ರಲ್ಲಿ ಮಹಿಳಾ ಸರ್ಕಾರಿ ನೌಕರರಿಗೆ ಪ್ರಸೂತಿ ರಜೆಯನ್ನು 135 ದಿನಗಳಿಂದ 180 ದಿನಗಳಿಗೆ ದಿನಾಂಕ 1-4-2012ರಿಂದ ಅನ್ವಯವಾಗುವಂತೆ ಆದೇಶಿಸಿರುವುದನ್ನು ಗಣನೆಗೆ ತೆಗೆದುಕೊಂಡು ಖಾಸಗಿ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ

ಕಾರ್ಯನಿರ್ವಹಿಸುತ್ತಿರುವ ಮಹಿಳಾ ನೌಕರರಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 52 ವಿವಿಧ 99, ದಿನಾಂಕ 2-2-2002ರ ಆದೇಶದಂತೆ ಪ್ರಸೂತಿ ರಜೆಯನ್ನು 135 ದಿನಗಳಿಂದ 180 ದಿನಗಳವರೆಗೆ ವಿಸ್ತರಿಸಿ ಆದೇಶಿಸಿದ್ದು, ಅದರಂತೆ ಸಂಬಂಧಪಟ್ಟ ಪ್ರಾಚಾರ್ಯರು, ಜಿಲ್ಲಾ ಉಪ ನಿರ್ದೇಶಕರು ಕ್ರಮವಹಿಸಲು ಸೂಚಿಸಿರುತ್ತಾರೆ. ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ ಇಡಿ 424 ಪಿಎಂಸಿ 2015, ಬೆಂಗಳೂರು, ದಿನಾಂಕ 27-6-2016**

ಸರ್ಕಾರದ ಆದೇಶ ಸಂಖ್ಯೆ ಆಇ 4 ಸೇವಿಸೇ 2012, ದಿ: 14-6-2012ರನ್ವಯ ಮಹಿಳಾ ಸರ್ಕಾರಿ ನೌಕರರಿಗೆ 135 ದಿನಗಳ ಪ್ರಸೂತಿ ರಜೆಯ ಅವಧಿಯನ್ನು 180 ದಿನಗಳಿಗೆ ಹೆಚ್ಚಿಸಿರುವಂತೆ ರಾಜ್ಯದಲ್ಲಿನ ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿನ ಮಹಿಳಾ ಸಿಬ್ಬಂದಿಗೆ 180 ದಿನಗಳ ಪ್ರಸೂತಿ ರಜೆಯ ಸೌಲಭ್ಯವನ್ನು ವಿಸ್ತರಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 113 ವೆಚ್ಚ-8/2016, ದಿ: 18-5-2016ರಂದು ನೀಡಿರುವ ಸಹಮತಿ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

27/6/16

(ಹೆಚ್.ಎಸ್.ಹೊನ್ನೇಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರಾಥಮಿಕ)

ಸಂಕಲನಕಾರರು, ಕರ್ನಾಟಕ ರಾಜ್ಯ ವಿಶೇಷ ಪತ್ರ, ಬೆಂಗಳೂರು — ಈ ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ವಿಶೇಷ ಪತ್ರದಲ್ಲಿ ಪ್ರಕಟಿಸಿ, ಪ್ರಕಟಿತ 500 ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲಾಗಿದೆ.

ಇವರಿಗೆ :

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು,
2. ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ
4. ನಿರ್ದೇಶಕರು, ಪ್ರಾಥಮಿಕ/ಪ್ರೌಢ/ ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು/ಧಾರವಾಡ/ಕಲಬುರಗಿ
5. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು (ಆಡಳಿತ)/ ಉಪನಿರ್ದೇಶಕರು (ಅಭಿವೃದ್ಧಿ)/ಕ್ಷೇತ್ರ ಶಿಕ್ಷಣಾಧಿಕಾರಿಗಳು/ಕ್ಷೇತ್ರ ಸಂಪನ್ಮೂಲ ಅಧಿಕಾರಿಗಳು – ಸಂಬಂಧಿಸಿದ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಮುಖಾಂತರ
6. ರಾಜ್ಯದ ಎಲ್ಲಾ ಜಂಟಿ ನಿರ್ದೇಶಕರು/ಉಪ ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.